# ಕರ್ನಾಟಕ ವಿಧಾನ ಪರಿಷತ್ತು

| | | | |
|---|---|---|---|
| 1 | ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | : | 1462 |
| 2 | ಸದಸ್ಯರ ಹೆಸರು | : | ಶ್ರೀ ಕುಶಾಲಪ್ಪ ಎಂ.ಪಿ (ಸುಜಾ) (ಸ್ಥಳೀಯ ಸಂಸ್ಥೆಗಳಿಂದ ಚುನಾಯಿತರಾದವರು) |
| 3 | ಉತ್ತರಿಸುವ ದಿನಾಂಕ | : | 18.12.2025 |
| 4 | ಉತ್ತರಿಸುವ ಸಚಿವರು | : | ಗೃಹ ಸಚಿವರು |

| ಕ್ರಸಂ | ಪ್ರಶ್ನೆ | ಉತ್ತರ |
|---|---|---|
| ಅ. | ಪೊಲೀಸ್ ಇಲಾಖೆಯಲ್ಲಿ ಬರುವ ಎಲ್ಲಾ ವಿಭಾಗಗಳಲ್ಲಿನ ಮುಖ್ಯ ಪೇದೆಗಳು ಮತ್ತು ಅದಕ್ಕೂ ಮೇಲ್ಪಟ್ಟ ಸಿಬ್ಬಂದಿ/ಅಧಿಕಾರಿಗಳ ಅಂತರ್ ಜಿಲ್ಲಾ ವರ್ಗಾವಣೆಯ ಪ್ರಸ್ತಾವನೆ ಸರ್ಕಾರದ ಮುಂದಿದೆಯೇ ? | ಪೊಲೀಸ್ ಇಲಾಖೆಯ ಡಿ.ಎ.ಆರ್/ಸಿ.ಎ.ಆರ್/ಸಿವಿಲ್ ವಿಭಾಗದ ಪಿಎಸ್ಐ ವೃಂದದಿಂದ ಪಿಸಿ ವೃಂದದ ಹುದ್ದೆಗಳಲ್ಲಿ ಕರ್ತವ್ಯ ನಿರ್ವಹಿಸುತ್ತಿರುವ ಸಿಬ್ಬಂದಿಗಳಿಗೆ ಅಂತರ್ ವಲಯ/ಜಿಲ್ಲಾ ವರ್ಗಾವಣೆಗೆ ಅವಕಾಶ ಕಲ್ಪಿಸಿ ಸರ್ಕಾರವು ಕರ್ನಾಟಕ ರಾಜ್ಯ ಪೊಲೀಸ್ ಇಲಾಖೆ (ವರ್ಗಾವಣೆ) (ವಿಶೇಷ) ನಿಯಮಗಳು 2022ನ್ನು ರಚಿಸಿದೆ. ಸದರಿ ನಿಯಮವು ದಿನಾಂಕ:22.02.2023 ರಿಂದ ಜಾರಿಗೆ ಬಂದಿರುತ್ತದೆ. ಅಲ್ಲದೆ ಸದರಿ ನಿಯಮಗಳ ಜಾರಿಗಾಗಿ ಆದೇಶ ಸಂಖ್ಯೆ:ಒಇ 93 ಪಿಪಿಎಸ್ 2022, ದಿನಾಂಕ:15.07.2024 ರಲ್ಲಿ ಮಾರ್ಗಸೂಚಿಯನ್ನು ಸಹ ಹೊರಡಿಸಿರುತ್ತದೆ. ಸದರಿ ಮಾರ್ಗಸೂಚಿಗಳನ್ವಯ ಬಯಸುವ ಅಂತರ್ ಜಿಲ್ಲಾ ವರ್ಗಾವಣೆಗೆ ಅರ್ಹರಿರುವ ಮತ್ತು ಅಂತರ್ ಜಿಲ್ಲಾ ವರ್ಗಾವಣೆ ಅಧಿಕಾರ/ಸಿಬ್ಬಂದಿಗಳನ್ನು ಅಂತರ್ ಜಿಲ್ಲಾ ವರ್ಗಾವಣೆಗೆ ಪರಿಗಣಿಸುವ ಪ್ರಕ್ರಿಯೆ ಚಾಲ್ತಿಯಲ್ಲಿದೆ. |
| ಆ. | ಇನ್ನಿತರ ಇಲಾಖೆಗಳಲ್ಲಿ ಅಧಿಕಾರಿಗಳು/ ಸಿಬ್ಬಂದಿಗಳಿಗೆ ನೀಡಲು ಸಾಮಾನ್ಯ ವರ್ಗಾವಣೆಯನ್ನು ಪೊಲೀಸ್ ಇಲಾಖೆಯ ಎಲ್ಲಾ ವಿಭಾಗಗಳ ಸಿಬ್ಬಂದಿ/ ಅಧಿಕಾರಿಗಳಿಗೆ ನೀಡದಿರಲು ಕಾರಣಗಳೇನು? | ಪೊಲೀಸ್ ಇಲಾಖೆಯಲ್ಲಿ ಗುಪ್ತ ಮಾಹಿತಿ ಸಂಗ್ರಹಣೆ, ಕಾನೂನು ಮತ್ತು ಸುವ್ಯವಸ್ಥೆ ನಿರ್ವಹಣೆ, ಅಪರಾಧ ಹಾಗೂ ಸಂಚಾರ ನಿಯಂತ್ರಣ ನಿರ್ವಹಣೆ ಹಾಗೂ ಕೋಮು ಸೂಕ್ಷ್ಮ ಪ್ರದೇಶಗಳಲ್ಲಿ ನಿರಂತರ ಜಾಗೃತಿ ವಹಿಸಬೇಕಾಗಿರುವುದರಿಂದ ಇಲಾಖೆಯ ಸಿಬ್ಬಂದಿಗಳಿಗಾಗಿಯೇ ಪ್ರತ್ಯೇಕ ವರ್ಗಾವಣಾ ಮಾರ್ಗಸೂಚಿಯನ್ನು ರಚಿಸಲಾಗಿರುತ್ತದೆ. ಅದರ ಆಧಾರದ ಮೇಲೆ ಇಲಾಖೆಯ ಎಲ್ಲಾ ವಿಭಾಗಗಳ (ನಿಯೋಜನೆಗೆ ಒಳಪಡುವ ವಿಶೇಷ ಘಟಕಗಳನ್ನು ಹೊರತುಪಡಿಸಿ) ಸಿಬ್ಬಂದಿಗಳನ್ನು ಅಂತರ ಜಿಲ್ಲಾ ವರ್ಗಾವಣೆಗೆ ಪರಿಗಣಿಸಲಾಗುತ್ತದೆ. |
| ಇ. | ಹಲವು ವರ್ಷಗಳಿಂದ ಒಂದೇ ಜಿಲ್ಲೆಯಲ್ಲಿ ಕಾರ್ಯನಿರ್ವಹಿಸುತ್ತಿರುವ ಪೊಲೀಸ್ ಇಲಾಖೆಯ (ಸಿವಿಲ್,ಸಿ.ಎ.ಆರ್.ಡಿ.ಎ.ಆರ್ ಸಿಬ್ಬಂದಿ/ಅಧಿಕಾರಿಗಳು ತಮ್ಮ ಸ್ವ-ಇಚ್ಛೆಯ ಜಿಲ್ಲೆಗಳಿಗೆ ವರ್ಗಾವಣೆ ಬಯಸುತ್ತಿದ್ದು, ಈ ಬಗ್ಗೆ ಸರ್ಕಾರದ ಸ್ಪಷ್ಟ ನಿಲುವೇನು? | ಸರ್ಕಾರದ ಆದೇಶ ಸಂಖ್ಯೆ:ಒಇ 93 ಪಿಪಿಎಸ್ 2022, ದಿನಾಂಕ:15.07.2024ರ ಮಾರ್ಗಸೂಚಿಯನ್ವಯ ಷರತ್ತು ಮತ್ತು ನಿಬಂಧನೆಗಳನ್ನು ಪೂರೈಸಿದ್ದಲ್ಲಿ ಅಂತರ್ ಜಿಲ್ಲಾ ವರ್ಗಾವಣೆಗೆ ಪರಿಗಣಿಸಲಾಗುತ್ತಿದೆ. |

**ಹೆಚ್‌ಡಿ 349 ಪಿಹೆಚ್‌ಎಸ್ 2025**

(ಡಾ|| ಜಿ. ಪರಮೇಶ್ವರ)
ಗೃಹ ಸಚಿವರು